ದೂರವಾಣಿ ಸಂಖ್ಯೆ: 080–22212343
ಫ್ಯಾಕ್ಸ್ ಸಂಖ್ಯೆ: 080–22278803
ಅಂತರ್ಜಾಲ: https://kptcl.karnataka.gov.in
ಮಿಂಚಂಚೆ : director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521
**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು–560 009)**

**ಸಂಖ್ಯೆ: ಕವಿಪ್ರನಿನಿ/ಬಿ16/3597/1998–99** **ದಿನಾಂಕ:** 15 MAY 2020

## ಅಧಿಸೂಚನೆ

**ವಿಷಯ:** ಮಗುವನ್ನು ದತ್ತು ಪಡೆದ ನೌಕರರಿಗೆ ಮಾತೃತ್ವ ರಜೆ ಮತ್ತು ಪಿತೃತ್ವ ಮಂಜೂರು ಮಾಡುವ ಬಗ್ಗೆ. – ಕವಿಮಂ ನೌಕರರ ಸೇವಾ ನಿಯಮಗಳ ತಿದ್ದುಪಡಿ ಬಗ್ಗೆ.
**ಉಲ್ಲೇಖ:** ಕರ್ನಾಟಕ ಸಿವಿಲ್ ಸೇವಾ ನಿಯಮಗಳ ನಿಯಮಗಳು–1958 ರ ನಿಯಮ 135(ಎ).

*****

ಸರ್ಕಾರದ ಆದೇಶ ಸಂಖ್ಯೆ: ಆಇ 1 ಸೇನಿಸೇ 2020 ದಿನಾಂಕ: 06.02.2020 ರಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958 ರ ನಿಬಂಧನೆ–135(ಎ) ರಲ್ಲಿ ವಿಧಿಸಿರುವ ಇತರೆ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಮಹಿಳಾ ಸರ್ಕಾರಿ ನೌಕರಳು ದತ್ತಕದ ಸಮಯದಲ್ಲಿ ಎರಡು ಜೀವಂತ ಮಕ್ಕಳನ್ನು ಹೊಂದಿರತಕ್ಕದ್ದಲ್ಲ ಎಂಬ ಷರತ್ತಿಗೊಳಪಟ್ಟು ಮಹಿಳಾ ಸರ್ಕಾರಿ ನೌಕರಳು ಮಗುವನ್ನು ದತ್ತು ಪಡೆದ ಸಂದರ್ಭದಲ್ಲಿ 180 ದಿನಗಳ ರಜೆಯನ್ನು (ಹೆರಿಗೆ ರಜೆ ಮಾದರಿಯಲ್ಲಿ) ದತ್ತು ಪ್ರಕ್ರಿಯೆಯು ಮಾನ್ಯತೆ ಹೊಂದಿದ ದಿನಾಂಕದಿಂದ ಮಂಜೂರು ಮಾಡಲು ಹಾಗೂ ಅಂತಹ ದತ್ತಕ ಪಡೆದ ಪ್ರಕರಣಗಳಲ್ಲಿ ಪಿತೃತ್ವ ರಜೆ ಮಾದರಿಯಲ್ಲಿಯೇ ನಿಯಮ–135(ಬಿ) ರಲ್ಲಿ ವಿಧಿಸಿರುವ ಇತರೆ ಷರತ್ತು ಮತ್ತು ನಿಬಂಧನೆಗೊಳಪಟ್ಟು 15 ದಿನಗಳ ರಜೆಯನ್ನು ದತ್ತು ಪ್ರಕ್ರಿಯೆಯು ಮಾನ್ಯತೆ ಹೊಂದಿದ ದಿನಾಂಕದಿಂದ ಮಂಜೂರು ಮಾಡಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಆದ್ದರಿಂದ, ಸದರಿ ನಿಬಂಧನೆಯನ್ನು ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ನೌಕರರ ಸೇವಾ ನಿಯಮಗಳಲ್ಲಿ, ಈ ಕೆಳಕಂಡಂತೆ ಅಳವಡಿಸಿಕೊಳ್ಳಲಾಗಿದೆ:

1. **ಶೀರ್ಷಿಕೆ ಮತ್ತು ಆರಂಭ:**

   ಅ) ಈ ನಿಯಮಗಳನ್ನು ಕವಿಮಂ ನೌಕರರ ಸೇವಾ ನಿಯಮಗಳು(ತಿದ್ದುಪಡಿ), 2020 ಎಂದು ಕರೆಯತಕ್ಕದ್ದು.
   ಆ) ಈ ತಿದ್ದುಪಡಿಯು ದಿನಾಂಕ: 06.02.2020 ರಿಂದ ಜಾರಿಗೆ ಬರುತ್ತದೆ.

2. **ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ನೌಕರರ ಸೇವಾ ನಿಯಮಗಳ ಅಧ್ಯಾಯ–1 ರ ಅಡಿಯಲ್ಲಿ ನಿಬಂಧನೆ–131 ಕ್ಕೆ ಸೇರ್ಪಡೆ**

ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ನೌಕರರ ಸೇವಾ ನಿಯಮಗಳ ಅಧ್ಯಾಯ–1 ರ ಅಡಿಯಲ್ಲಿ ನಿಬಂಧನೆ–**131(ಡಿ)** ನ್ನು ಈ ಕೆಳಕಂಡಂತೆ ಹೊಸದಾಗಿ ಸೇರ್ಪಡೆ ಮಾಡಿಕೊಳ್ಳಲಾಗಿದೆ:

*"ನಿಗಮದ ಮಹಿಳಾ ನೌಕರರು ಮಗುವೊಂದನ್ನು ದತ್ತು ಪಡೆದುಕೊಂಡಾಗ, ಒಂದು ವರ್ಷದ ಅಥವಾ ದತ್ತಕ ಮಗುವಿಗೆ ಒಂದು ವರ್ಷ ವಯಸ್ಸಾಗುವವರೆಗೆ ಇವುಗಳಲ್ಲಿ ಯಾವುದು ಕಡಿಮೆಯೋ ಆವರೆಗೆ, 180 ದಿನಗಳ ರಜೆಯನ್ನು (ಹೆರಿಗೆ ರಜೆ ಮಾದರಿಯಲ್ಲಿ), ಅಂತಹ ಮಹಿಳಾ*

*ನೌಕರರು ಎರಡು ಜೀವಂತ ಮಕ್ಕಳನ್ನು ಹೊಂದಿರತಕ್ಕದ್ದಲ್ಲವೆಂಬ ಷರತ್ತಿಗೆ ಒಳಪಟ್ಟು, ದತ್ತು ಪ್ರಕ್ರಿಯೆಯು ಮಾನ್ಯತೆ ಹೊಂದಿದ ದಿನಾಂಕದಿಂದ ಮಂಜೂರು ಮಾಡತಕ್ಕದ್ದು. ಅಂತಹ ದತ್ತಕ ಪಡೆದ ಪ್ರಕರಣದಲ್ಲಿ ಪುರುಷ ನೌಕರರಿಗೆ ಪಿತೃತ್ವ ರಜೆ ಮಾದರಿಯಲ್ಲಿಯೇ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ನೌಕರರ ಸೇವಾ ನಿಯಮಗಳ ನಿಯಮ-131 (ಸಿ) ರಲ್ಲಿ ವಿಧಿಸಿರುವ ಇತರೆ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು 15 ದಿನಗಳ ರಜೆಯನ್ನು ದತ್ತು ಪ್ರಕ್ರಿಯೆಯು ಮಾನ್ಯತೆ ಹೊಂದಿದ ದಿನಾಂಕದಿಂದ ಮಂಜೂರು ಮಾಡತಕ್ಕದ್ದು"*

**"ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿದೆ"**

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.